**O.S.No. 15/2019**
**PW1**

ದಿನಾಂಕ 01.09.2025 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಸಿ.ಎನ್.ಜಿ ವಕೀಲರಿಂದಃ

ಈ ಪ್ರಕರಣದಲ್ಲಿ ನಾನು ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಪಹಣಿ ಪತ್ರಿಕೆಯನ್ನು ನಿಪಿ-1 ಎಂದು, **W.P No**. 1516/2017 ರ ಆದೇಶದ ದೃಢೀಕೃತ ನಕಲನ್ನು ನಿಪಿ-2 ಎಂದು, ದಿಃ 23.1.2019ರ ಲೀಗಲ್ ನೋಟೀಸ್ ಕಚೇರಿ ಪ್ರತಿಯನ್ನು ನಿಪಿ-3 ಎಂದು, ನಾಲ್ಕು ಅಂಚೆ ರಶೀದಿಗಳನ್ನು ಒಟ್ಟಾಗಿ ನಿಪಿ-4 ಎಂದು, ಭೂ ಪರಿವರ್ತನೆ ಆದೇಶದ ದೃಢೀಕೃತ ನಕಲನ್ನು ನಿಪಿ-5 ಎಂದು, ಮ್ಯೂಟೇಷನ್ ರಿಜಿಸ್ಟರಿನ ದೃಢೀಕೃತ ನಕಲನ್ನು ನಿಪಿ-6 ಎಂದು, ಸರ್ವೆ ನಕಾಶೆಯ ದೃಢೀಕೃತ ನಕಲನ್ನು ನಿಪಿ-7 ಎಂದು, ಅಡಂಗಲ್ ನ ದೃಢೀಕೃತ ನಕಲನ್ನು ನಿಪಿ-8 ಎಂದು, ಮುಕ್ತ್ಯಾರು ನಾಮೆಯನ್ನು ನಿಪಿ-9 ಎಂದು, ಭೂ ಸ್ವಾಧೀನ ಕಾಯ್ದೆ ಕಲಂ 4(1) ಮತ್ತು 6(1) ರಡಿಯಲ್ಲಿ ಮಾಡಿದ ಅಧಿಸೂಚನೆಯ ದೃಡೀಕೃತ ನಕಲುಗಳನ್ನು ನಿಪಿ-10 ಮತ್ತು 11 ಎಂದು ಗುರುತಿಸಲಾಯಿತು. ಸರ್ವೆ ನಕ್ಷೆಯನ್ನು ಪ್ರತಿವಾದಿ ಪರ ವಕೀಲರ ಆಕ್ಷೇಪಣೆಗೊಳಪಟ್ಟು ನಿಪಿ-12 ಎಂದು ಗುರುತಿಸಲಾಯಿತು. ಒ.ಎಸ್ ನಂ.84/1948 ರ ತೀರ್ಪಿನ ದೃಢೀಕೃತ ನಕಲನ್ನು ನಿಪಿ-13 ಎಂದು, ಒ.ಎಸ್ ನಂಃ 82/2019 ರ ವಾದ ಪತ್ರ ಮತ್ತು ಆದೇಶ ಪುಟದ ದೃಢೀಕೃತ ನಕಲುಗಳನ್ನು ನಿಪಿ-14 ಮತ್ತು 15 ಎಂದು ಗುರುತಿಸಲಾಯಿತು.

(ಮುಂದುವರಿದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೇಳಿದ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಸುಳ್ಯ